ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು

E-mail:commissioner.pue@gmail.com. * Ph. No.23361857, 23361858* Fax-23361852

ಸಂಖ್ಯೆ: ಪಪೂಶಿ/ಶೈಶಾ/ಪ.ಪು.ಮು.ಟೆಂ/04/2016-17 ದಿನಾಂಕ: 20 -04-2017.

# ಸುತ್ತೋಲೆ

ವಿಷಯ:- 2017-18ನೇ ಸಾಲಿನಲ್ಲಿ ಎನ್.ಸಿ.ಇ.ಆರ್.ಟಿ. ಪಠ್ಯಪುಸ್ತಕಗಳನ್ನು ಅಳವಡಿಸಿ ಕೊಳ್ಳುತ್ತಿರುವ ಬಗ್ಗೆ.

ಉಲ್ಲೇಖ:- ಸರ್ಕಾರದ ಆದೇಶ ಸಂಖ್ಯೆ ಇಡಿ 50 ಟಿಪಿಯು 2017, ದಿನಾಂಕ:13-04-2017.

-*-

2012-13ನೇ ಸಾಲಿನಿಂದ ಪ್ರಥಮ ಪಿಯುಸಿಗೆ ಹಾಗೂ 2013-14ನೇ ಸಾಲಿನಿಂದ ದ್ವಿತೀಯ ಪಿಯುಸಿಗೆ ಪದವಿ ಪೂರ್ವ ಶಿಕ್ಷಣದ ವಿಜ್ಞಾನ ವಿಭಾಗದ ಭೌತಶಾಸ್ತ್ರ, ರಸಾಯನಶಾಸ್ತ್ರ, ಗಣಿತಶಾಸ್ತ್ರ ಹಾಗೂ ಜೀವಶಾಸ್ತ್ರ ವಿಷಯಗಳಿಗೆ ಎನ್.ಸಿ.ಇ.ಆರ್.ಟಿ. ಪಠ್ಯಪುಸ್ತಕಗಳನ್ನು ಸರ್ಕಾರದ ಆದೇಶದಂತೆ ಅಳವಡಿಸಿಕೊಳ್ಳಲಾಗಿದೆ.

ಪದವಿ ಪೂರ್ವ ಶಿಕ್ಷಣ ಹಂತದ ವಾಣಿಜ್ಯ ವಿಭಾಗದ ವಿಷಯಗಳಾದ; ಲೆಕ್ಕಶಾಸ್ತ್ರ, ಅರ್ಥಶಾಸ್ತ್ರ ಮತ್ತು ವ್ಯವಹಾರ ಅಧ್ಯಯನ ವಿಷಯಗಳು ವಾಣಿಜ್ಯದ ದೃಷ್ಟಿಯಿಂದ ಬೇಡಿಕೆಯುಳ್ಳ ವಿಷಯಗಳಾಗಿದ್ದು, ಈ ವಿಷಯಗಳನ್ನು ಅಧ್ಯಯನ ಮಾಡುವ ವಿದ್ಯಾರ್ಥಿಗಳು ಸ್ಪರ್ಧಾತ್ಮಕತೆಯನ್ನು ಹೊಂದುವ ದೃಷ್ಟಿಯಿಂದ ಹಾಗೂ ರಾಷ್ಟ್ರಮಟ್ಟದ ವಿವಿಧ ವೃತ್ತಿ ಕೋರ್ಸುಗಳ ಪ್ರವೇಶ ಪರೀಕ್ಷೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸ ಬೇಕಾಗಿರುತ್ತದೆ.

ಪದವಿ ಪೂರ್ವ ಶಿಕ್ಷಣ ಹಂತದ ವಾಣಿಜ್ಯ ವಿಭಾಗದ ವಿಷಯಗಳಾದ, ಲೆಕ್ಕಶಾಸ್ತ್ರ, ಅರ್ಥಶಾಸ್ತ್ರ ಮತ್ತು ವ್ಯವಹಾರ ಅಧ್ಯಯನ ವಿಷಯಗಳು ಪ್ರಸ್ತುತ ಬೇಡಿಕೆಯುಳ್ಳ ವಿಷಯಗಳಾಗಿವೆ. ಈ ವಿಷಯಗಳನ್ನು ಅಧ್ಯಯನ ಮಾಡುವ ವಿದ್ಯಾರ್ಥಿಗಳು ರಾಷ್ಟ್ರಮಟ್ಟದಲ್ಲಿ ವಿವಿಧ ವೃತ್ತಿ ಕೋರ್ಸುಗಳ ಪ್ರವೇಶ ಪರೀಕ್ಷೆಗಳನ್ನು ಯಶಸ್ವಿಯಾಗಿ ಪೂರ್ಣಗೊಳಿಸಬೇಕಾಗಿರುತ್ತದೆ. ಈ ಹಂತದಲ್ಲಿ ಸ್ಪರ್ಧೆಯನ್ನು ಎದುರಿಸಬೇಕಾಗುತ್ತದೆ.

ಪ್ರಯುಕ್ತ, ಈ ವಿಷಯಗಳಿಗೆ ರಾಷ್ಟ್ರಮಟ್ಟದಲ್ಲಿ ಉತ್ತಮವಾಗಿ ವಿನ್ಯಾಸಗೊಳಿಸಲಾಗಿರುವ ಎನ್.ಸಿ.ಇ.ಆರ್.ಟಿ. ಪಠ್ಯಪುಸ್ತಕಗಳನ್ನು ಅಳವಡಿಸುವುದು ಸೂಕ್ತವಾಗಿರುತ್ತದೆ. ಈ ಹಿನ್ನೆಲೆಯಲ್ಲಿ, ಸರ್ಕಾರಿ ಆದೇಶದಂತೆ, ಲೆಕ್ಕಶಾಸ್ತ್ರ, ಅರ್ಥಶಾಸ್ತ್ರ ಮತ್ತು ವ್ಯವಹಾರ ಅಧ್ಯಯನ ವಿಷಯಗಳಿಗೆ ಸಂಬಂಧಿಸಿದಂತೆ, 2017-18ನೇ ಶೈಕ್ಷಣಿಕ ಸಾಲಿನ ಪ್ರಥಮ ಪಿಯುಸಿಗೆ ಹಾಗೂ 2018-19ನೇ ಶೈಕ್ಷಣಿಕ ಸಾಲಿನ ದ್ವಿತೀಯ ಪಿಯುಸಿಗೆ ಎನ್.ಸಿ.ಇ.ಆರ್.ಟಿ. ಸಿದ್ಧಪಡಿಸಿರುವ ಪಠ್ಯಪುಸ್ತಕಗಳನ್ನು ಅಧಿಕೃತ ಪಠ್ಯಪುಸ್ತಕಗಳೆಂದು ನಿಗಧಿಪಡಿಸಿಕೊಂಡು ಯಥಾವತ್ತಾಗಿ ಅಳವಡಿಸಿಕೊಳ್ಳಲಾಗುತ್ತಿದೆ. ಈ ವಿಷಯಗಳಿಗೆ ಸಂಬಂಧಿಸಿದ ಆಂಗ್ಲ ಮಾಧ್ಯಮದ ಎನ್.ಸಿ.ಇ.ಆರ್.ಟಿ. ಪಠ್ಯಪುಸ್ತಕಗಳನ್ನು ಎನ್.ಸಿ.ಇ.ಆರ್.ಟಿ.

....2

ಯಿಂದಲೇ ಪುಸ್ತಕ ವಿತರಕರ ಮೂಲಕ ವಿದ್ಯಾರ್ಥಿಗಳಿಗೆ ಲಭ್ಯವಾಗುವಂತೆ ಮಾಡಲು ಕ್ರಮ ವಹಿಸಲಾಗಿದೆ.

ಈ ವಿಷಯಗಳ ಕನ್ನಡ ಮಾಧ್ಯಮದ ಪಠ್ಯಪುಸ್ತಕಗಳು ಸಿದ್ಧವಾಗಿದ್ದು ಮುದ್ರಣದ ಹಂತದಲ್ಲಿದೆ. ಈ ವಿಷಯಗಳ ಪಠ್ಯಪುಸ್ತಕಗಳನ್ನು ಇಲಾಖೆಯ ಜಾಲತಾಣದಲ್ಲಿಯೂ ಪ್ರಕಟಿಸಿ, ವಿದ್ಯಾರ್ಥಿಗಳು ಡೌನ್‌ಲೋಡ್ ಮಾಡಲು ಸೌಲಭ್ಯ ಕಲ್ಪಿಸಲಾಗುವುದು.

ಈ ಮೇಲಿನ ವಿಷಯವನ್ನು ಸಂಬಂಧಿಸಿದ ಕೋರ್ಸ್‌ಗಳನ್ನು ಅಧ್ಯಯನ ಮಾಡುವ ವಿದ್ಯಾರ್ಥಿಗಳು ಹಾಗೂ ಪೋಷಕರಿಗೆ ಮಾಹಿತಿ ನೀಡಲು ತಿಳಿಸಿದೆ.

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

ರವರಿಗೆ:

1. ರಾಜ್ಯದ ಎಲ್ಲಾ ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕರುಗಳಿಗೆ – ಅಗತ್ಯ ಕ್ರಮಕ್ಕಾಗಿ.
2. ರಾಜ್ಯ ಎಲ್ಲಾ ಸರ್ಕಾರಿ, ಅನುದಾನಿತ ಹಾಗೂ ಅನುದಾನರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಜಿಲ್ಲಾ ಉಪನಿರ್ದೇಶಕರ ಮೂಲಕ– ಅಗತ್ಯ ಕ್ರಮಕ್ಕಾಗಿ.
3. ಸಹಾಯಕ ನಿರ್ದೇಶಕರು, ಇ–ಆಡಳಿತ, ಪದವಿ ಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ, ಬೆಂಗಳೂರು, ಇವರಿಗೆ ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
4. ಕಛೇರಿ ಪ್ರತಿ.